ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಚಾಮರಾಜನಗರ ತಾಲ್ಲೂಕು ಕಛೇರಿ ಬಳಿ ಸಾರ್ವಜನಿಕರಿಗೆ ನಾಗರಿಕ ಸೌಲಭ್ಯ ಒದಗಿಸುವ ಬಗ್ಗೆ

ಶ್ರೀಎಸ್.ನಾಗರಾಜ್(ಸಂದೇಶ್‌ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ):-

1204 (1413) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರತಿದಿನವೂ ನಗರ ಹಾಗೂ ಗ್ರಾಮಿಣ ಪ್ರದೇಶದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ತಾಲ್ಲೂಕು ಕಛೇರಿ ಕೆಲಸಕ್ಕೆ ಬರುತ್ತಿದ್ದು, ಅವರಿಗೆ ಸೂಕ್ತ ನಾಗರಿಕ ಸೌಲಭ್ಯ ಕಲ್ಪಿಸದೇ ಅನಾನೂಕೂಲ - ವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಚಾಮರಾಜನಗರ ತಾಲ್ಲೂಕು ಕಛೇರಿ ಬಳಿ, ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ, ಕುಳಿತುಕೊಳ್ಳಲು ಜಾಗ ಹಾಗೂ ಆಸನಗಳ ವ್ಯವಸ್ಥೆ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಈ ಬಗ್ಗೆ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಅಹವಾಲು ಸಲ್ಲಿಸಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?